ಕನ್ನಡ ರಾಜ್ಯ
ಕನ್ನಡ ರಾಜ್ಯ
ಕನ್ನಡ

ತುಳು ಭಾರತ ದೇಶದ ಕರ್ನಾಟಕ ರಾಜ್ಯದ ಪಶ್ಚಿಮ ತೀರದಲ್ಲಿರುವ ದಕ್ಷಿಣ ಕನ್ನಡ, ಉಡುಪಿ ಮತ್ತು ಕಾಸರಗೋಡು ಜಿಲ್ಲೆಗಳಲ್ಲಿ ಹೆಚ್ಚು ಮಾತನಾಡುವ ಭಾಷೆ. ತುಳು ಮಾತಾಡುವವರನ್ನು ತುಳುವರು (ಅಥವಾ ತುಳುವಲ್ಲಿ ತುಳುವೆರ್ )ಎಂದು ಕರೆ ಯುತ್ತಾರೆ. ಹಿಂದೆ ತುಳು ಬ್ರಾಹ್ಮಣರು ತಿಗಳಾರಿ ಲಿಪಿ ಎಂಬ ಲಿಪಿಯನ್ನು ಉಪಯೋಗಿಸುತ್ತಿದರು. ಈ ಲಿಪಿಯ ಮುಖ್ಯಭಾಷೆ ಸಂಸ್ಕೃತ, ಕಾಲಕ್ರಮೇಣ ಅದರ ಬಳಕೆ ಇಲ್ಲವಾಗಿದೆ.ಈ ಲಿಪಿಯ ಬಗ್ಗೆ ತಿಳಿದಿರುವವರು ಈಗ ಕಡಿಮೆ. ಪುರಾತನ ತಿಗಳಾರಿ ಲಿಪಿ ಮಲೆಯಾಳಂ ಲಿಪಿಯನ್ನು ಹೋಲುತ್ತದೆ. ಪ್ರಸ್ತುತ ತುಳುಭಾಷೆಯನ್ನು ಬರೆಯಲು ಕನ್ನಡ ಲಿಪಿಯನ್ನು ಬಳಸುತ್ತಾರೆ. ಆದರೆ ತುಳುಭಾಷೆಯಲ್ಲಿ ರಚಿತವಾಗಿರುವ ಕೃತಿಗಳ ಲಭ್ಯತೆ ಕಡಿಮೆ ಇರುವುದರಿಂದ ತುಳು ಭಾಷೆಯ ಪ್ರಾಚೀನತೆಯನ್ನು ಅಂದಾಜು ಮಾಡುವುದು ಕಷ್ಟ. ದಕ್ಷಿಣ ಕನ್ನಡ, ಉಡುಪಿ ಮತ್ತು ಕಾಸರಗೋಡು ಜಿಲ್ಲೆಯ ಬಹುಪಾಲು ಜನರು ತುಳು ಭಾಷೆ ಮಾತನಾಡುತ್ತಾರೆ. ಈ ಜಿಲ್ಲೆಗಳನ್ನು ಒಳಗೊಂಡ ಪ್ರದೇಶವನ್ನು ತುಳುನಾಡು ಎಂದು ಕರೆಯಲಾಗುತ್ತದೆ. ಹಾಗೆಯೇ ಮುಂಬಯಿ ಪಟ್ಟಣ, ಗುಜರಾತ್ ರಾಜ್ಯದ ಕೆಲ ಭಾಗಗಳಲ್ಲಿ ತುಳು ವರು ಇದ್ದಾರೆ. ಸುಮಾರು ೨ ದಶಲಕ್ಷ ಜನರು ತುಳು ಭಾಷೆ ಮಾತಾಡುತ್ತಾರೆ.

ಡಾ. ರಾಜ್‌ಕುಮಾರ್ ಪ್ರಸಿದ್ದ ಚಲನಚಿತ್ರ ನಟರು. ಕರ್ನಾಟಕದ ಅತ್ಯಂತ ಜನಪ್ರಿಯ ವ್ಯಕ್ತಿಗಳಲ್ಲಿ ಪ್ರಮುಖರು. ಕೇವಲ ನಟರಾಗಿ ಉಳಿಯದೆ ಹಿನ್ನೆಲೆ ಗಾಯಕರಾಗಿ ಸಹ ಹೆಸರು ಮಾಡಿದ್ದಾರೆ. ನಟಸಾರ್ವಭೌಮ ಬಿರುದು ಮತ್ತು ಮೈಸೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿಯನ್ನು ಪಡೆದಿದ್ದಾರೆ ಹಾಗೂ ಹಂಪಿ ವಿಶ್ವವಿದ್ಯಾಲಯದಿಂದ ನಾಡೋಜ ಪದವಿಯನ್ನು ಪಡೆದಿದ್ದಾರೆ.

ರ್‍ಯಾಂಕ್